## ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಾರವಾರ

### ಸಿ.ಸಿ. ನಂ. 102/2025

ಸಿ.ಡಬ್ಲ್ಯು 18
ಪಿ.ಡಬ್ಲ್ಯು 7

| | | |
|---|---|---|
| ಸಾಕ್ಷಿದಾರರ ಹೆಸರು | – | ಗಜಾನನ ನಾಯ್ಡು |
| ತಂದೆಯ ಹೆಸರು | – | ವೆಂಕಟೇಶ |
| ವಯಸ್ಸು | – | 53 ವರ್ಷ |
| ಉದ್ಯೋಗ | – | ಮುಖ್ಯ ಪೇದೆ , ದಾಂಡೇಲಿ ನಗರ ಪೊಲೀಸ್ ಠಾಣೆ |
| ವಾಸ್ತವ್ಯ | – | ದಾಂಡೇಲಿ |

(ಇಂದು ದಿನಾಂಕಃ 22–06–2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆಃ ಮಾನ್ಯ ಹಿರಿಯ ಸ.ಸ.ಅ. ರವರಿಂದಃ**

ನಾನು 2024 ರಿಂದ 2025 ರವರೆಗೆ ಸಿ ಇ ಎನ್ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯನಿರ್ವಹಿಸಿದ್ದೇನೆ.

ದಿನಾಂಕಃ 17–08–2024 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ–1 ರವರು ಸಂಜೆ 7–45 ಗಂಟೆಗೆ ಚಾ.ಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ಪ್ರಥಮ ವರ್ತಮಾನ ಹೇಳಿಕೆ, ಮುದ್ದೆಮಾಲುಗಳನ್ನು ಮತ್ತು ಆರೋಪಿಯನ್ನು ಹಾಜರುಪಡಿಸಿದ್ದು ಅದನ್ನು ಸ್ವೀಕರಿಸಿಕೊಂಡು, ನಮ್ಮ ಠಾಣೆಯ ಗುನ್ನಾ ನಂ. 21/2024 ರಲ್ಲಿ ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿದ್ದೇನೆ . ಪ್ರಥಮ ವರ್ತಮಾನ ಹೇಳಿಕೆಯನ್ನು ನಿಪಿ–7 ಎಂದು, ಸಾಕ್ಷಿಯ ಸಹಿಯನ್ನು ನಿಪಿ–7(ಎ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನಿಪಿ–8 ಎಂದು, ಸಾಕ್ಷಿಯ ಸಹಿಯನ್ನು ನಿಪಿ–8(ಎ) ಎಂದು ಗುರುತಿಸಲಾಯಿತು. ನಂತರ ದಸ್ತಗಿರಿ ಕ್ರಮ ಅನುಸರಿಸಿ ನ್ಯಾಯಾಲಯದ ಮುಂದೆ ಹಾಜರ ಪಡಿಸಿದ್ದೇನೆ. ಅಮಾನತ್ತು

ಪಡಿಸಿಕೊಂಡಂತಹ ಮುದ್ದೆ ಮಾಲುಗಳನ್ನು ಮಾಲುಪಟ್ಟಿಗೆ ಅಳವಡಿಸಿಕೊಂಡಿದ್ದೇನೆ. ಮುಂದಿನ ತನಿಖೆಯನ್ನು ಚಾಸಾ-19 ರವರಿಗೆ ವಹಿಸಿಕೊಟ್ಟಿದ್ದೇನೆ. ಆರೋಪಿ ಮತ್ತು ಮುದ್ದೆ ಮಾಲುಗಳನ್ನು ನೋಡಿ ಸಾಕ್ಷಿ ಗುರುತಿಸಿರುತ್ತಾರೆ . ಮೊಬೈಲ ಮತ್ತು ಗಾಂಜಾವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ಮು ಮಾ 1 ಮತ್ತು 2 ಎಂದು ಗುರುತಿಸಲಾಗಿದೆ .

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಜಿ ಪಿ ಟಿ ವಕೀಲರಿಂದಃ</u>**

ಆರೋಪಿ ಯಾವುದೇ ಅಪರಾಧ ಮಾಡದಿದ್ದರೂ ಸಹ ತನಿಖಾಧಿಕಾರಿಯ ಮಾತು ಕೇಳಿ ಸುಳ್ಳು ಕೇಸು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ತನಿಖಾಧಿಕಾರಿಯವರ ಮಾತು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಮುದ್ದೆ ಮಾಲುಗಳನ್ನು ಹಾಜರಪಡಿಸಿಲ್ಲ ಅನ್ನುವುದು ಸರಿಯಲ್ಲ. ನಮ್ಮ ಠಾಣೆಯ ಅಂಕೆಸಂಖ್ಯೆಗೋಸ್ಕರ ಸುಳ್ಳು ಕೇಸನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

ಮುಖ್ಯ ನ್ಯಾಯಿಕ ದಂ. ಕಾರವಾರ